ಕರ್ನಾಟಕ ವಿಧಾನ ಪರಿಷತ್ತು

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1751
2)	ಮಾನ್ಯ ಸದಸ್ಯರ ಹೆಸರು	ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3)	ಉತ್ತರಿಸಬೇಕಾದ ದಿನಾಂಕ	22/03/2021
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ)ಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ಸ್ಥಾನಮಾನ ನೀಡುವ ವಿಚಾರವಾಗಿ DGT, NCVT ಮತ್ತು NATIONAL COMMISSION FOR MINORITY EDUCATIONAL INSTITUTIONS ಇವರ ಪಾತ್ರಗಳೇನು; (ವಿವರ ನೀಡುವುದು)	ಕೇಂದ್ರ ಸರ್ಕಾರದ ಡಿ.ಜಿ.ಟಿ., ನವದೆಹಲಿ ರವರು ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗಳಲ್ಲಿನ ವೃತ್ತಿ/ಘಟಕಗಳಿಗೆ ಎನ್.ಸಿ.ವಿ.ಟಿ. ಸಂಯೋಜನೆ ನೀಡುವ ಪ್ರಾಧಿಕಾರವಾಗಿರುತ್ತಾರೆ. ಆದರೆ ಡಿ.ಜಿ.ಟಿ. ರವರ ನಿಯಮಗಳಲ್ಲಿ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ಎಂದು ಪರಿಗಣಿಸಿ ಸ್ಥಾನಮಾನ ನೀಡುವ ಬಗ್ಗೆ ಯಾವುದೇ ಮಾರ್ಗಸೂಚಿಗಳಿರುವುದಿಲ್ಲ.
ಆ)	ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ)ಗಳಿಗೆ ಅಲ್ಪ ಸಂಖ್ಯಾತರ ಸಂಸ್ಥೆ ಸ್ಥಾನಮಾನ ನೀಡುವ ಅಧಿಕಾರ DGT, NCVT ಗೆ ಇದೆಯೇ; (ದಾಖಲೆಗಳನ್ನು ಒದಗಿಸುವುದು)	ಡಿ.ಜಿ.ಟಿ. ನವದೆಹಲಿ ರವರಿಂದ ಎನ್.ಸಿ.ವಿ.ಟಿ. ಸಂಯೋಜನೆ ಹೊಂದಿದ ರಾಜ್ಯದ ಎಲ್ಲಾ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಪ್ರವೇಶ, ತರಬೇತಿ ಮತ್ತು ಪರೀಕ್ಷೆಯ ಎಲ್ಲಾ ಮಾನದಂಡಗಳನ್ನು ಡಿ.ಜಿ.ಟಿ. ನವದೆಹಲಿ ರವರ ನಿಯಮದಂತೆ ಅನುಸರಿಸುತ್ತಿದ್ದು, ಡಿ.ಜಿ.ಟಿ. ನವದೆಹಲಿ ರವರು ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಪರಿಗಣಿಸಲು ಅನುಮತಿ ನೀಡಿದಲ್ಲಿ ರಾಜ್ಯ ಸರ್ಕಾರದಿಂದ ಸೂಕ್ತ ಕ್ರಮವಹಿಸಲಾಗುವುದು.
ಇ)	ರಾಜ್ಯದ ಯಾವ ಯಾವ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ಸ್ಥಾನಮಾನ ನೀಡಿದೆ; ಹಾಗಿದ್ದಲ್ಲಿ, ಇಲಾಖೆಯಿಂದ ಈ ಸಂಸ್ಥೆಗಳಿಗೆ ನಿಯಮಾನುಸಾರ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ; (ವಿವರ ನೀಡುವುದು)	ರಾಜ್ಯದ ಯಾವುದೇ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗೆ ಇಲಾಖೆಯಿಂದ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ಸ್ಥಾನಮಾನ ನೀಡಿರುವುದಿಲ್ಲ.
ಈ)	ಸದರಿ ಸಂಸ್ಥೆ ರಾಜ್ಯದ ಕೆಲವು ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ಸ್ಥಾನಮಾನ ನೀಡಿದ್ದರೂ ರಾಜ್ಯ ಸರ್ಕಾರವು ಮಾನ್ಯತೆ ಮಾಡದಿದ್ದಲ್ಲಿ ಸಂವಿಧಾನದ ಅನುಚ್ಛೇದ 30ರ ಉಲ್ಲಂಘನೆಯಾಗುವುದಿಲ್ಲವೇ; ಇಂತಹ ಪ್ರಕರಣಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ? (ವಿವರ ನೀಡುವುದು)	ಡಿ.ಜಿ.ಟಿ. ನವದೆಹಲಿ ರವರು ಅಲ್ಪ ಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಪರಿಗಣಿಸಲು ಅನುಮತಿ ನೀಡಿದಲ್ಲಿ ರಾಜ್ಯ ಸರ್ಕಾರದಿಂದ ಸೂಕ್ತ ಕ್ರಮವಹಿಸಲಾಗುವುದು.

ಸಂಖ್ಯೆ: ಕೌಉಜೀಇ 25 ಕೈತಪ್ರ 2021

(ಡಾ.ಸಿ.ಎನ್.ಅಶ್ವಥ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು